# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 373 |
| ಸದಸ್ಯರ ಹೆಸರು | : | ಶ್ರೀ ಬಿ.ಎಂ.ಫಾರೂಖ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 05-12-2023 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸ್ಮಾರ್ಟ್ ಸಿಟಿ ಹೆಸರುಗಳಿಸಿರುವ ಮಂಗಳೂರು ನಗರಕ್ಕೆ ಒಂದು ಸುಸಜ್ಜಿತ ಕೇಂದ್ರ ಬಸ್ ನಿಲ್ದಾಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ: | ಹೌದು. |
| ಆ) | ಹಾಗಿದ್ದಲ್ಲಿ, ಒಂದು ಸ್ಮಾರ್ಟ್ ಹಾಗೂ ಅತ್ಯಾಧುನಿಕ ಪ್ರಯಾಣಿಕ ಸ್ನೇಹಿ ಬಸ್ ನಿಲ್ದಾಣದ ಸೌಲಭ್ಯವನ್ನು ಸರ್ಕಾರ ಕಾರ್ಯರೂಪಕ್ಕೆ ತರುವುದೆ(ವಿವರ ನೀಡುವುದು) | ಸ್ಮಾರ್ಟ್‌ಸಿಟಿ ಯೋಜನೆಯಡಿ ಮಂಗಳೂರು ಸ್ಮಾರ್ಟ್‌ಸಿಟಿ ಲಿಮಿಟೆಡ್ ವತಿಯಿಂದ ಕೇಂದ್ರ ಬಸ್ ನಿಲ್ದಾಣ ಯೋಜನೆಯನ್ನು ಪಿಪಿಪಿ ಮಾದರಿಯಡಿ ಪ್ರಸ್ತಾಪಿಸಲಾಗಿರುತ್ತದೆ. ಮಂಗಳೂರು ಸ್ಮಾರ್ಟ್‌ಸಿಟಿ ವತಿಯಿಂದ ಪಿಪಿಪಿ ಮಾದರಿಯಡಿ ಕೇಂದ್ರ ಬಸ್ ನಿಲ್ದಾಣ ಕಾಮಗಾರಿಗೆ ಈಗಾಗಲೇ ಮೂರು ಬಾರಿ ಟೆಂಡರ್ ಕರೆಯಲಾಗಿದ್ದರೂ ಸಹ ಯಾವುದೇ ಬಿಡ್‌ದಾರರು ಆಸಕ್ತಿ ತೋರಿಸಿರುವುದಿಲ್ಲ.<br><br>ಕೇಂದ್ರ ಸರ್ಕಾರದ ನಿರ್ದೇಶನದನ್ವಯ ಸ್ಮಾರ್ಟ್ ಸಿಟಿ ಕಾಮಗಾರಿಗಳನ್ನು ದಿನಾಂಕ:30.06.2024 ರೊಳಗೆ ಪೂರ್ಣಗೊಳಿಸಬೇಕಾಗಿರುತ್ತದೆ.<br><br>ಈ ಹಿನ್ನಲೆಯಲ್ಲಿ, ಮಂಗಳೂರು ನಗರದ ಸ್ಟೇಟ್ ಬ್ಯಾಂಕ್ ಬಳಿಯಿರುವ ತಾತ್ಕಾಲಿಕ ಬಸ್ ನಿಲ್ದಾಣವನ್ನು ನವೀಕರಣಗೊಳಿಸಲು ಕ್ರಮವಹಿಸಲಾಗಿದೆ. |
| ಇ) | ಹಲವು ರಾಜ್ಯ ರಾಷ್ಟ್ರೀಯ ಹೆದ್ದಾರಿಗಳು ನಗರದ ಮಧ್ಯೆಯೇ ಹಾದುಹೋಗುತ್ತಿದ್ದು, ನಾಗರಿಕರು ಪ್ರಯಾಣಿಕರು ಬಹಳ ತೊಂದರೆ ಅನುಭವಿಸುತ್ತಿರುವುದು ಸರ್ಕಾರ ಗಮನಿಸಿದೆಯೇ: | ಹೌದು.<br><br>ಕೆ.ಪಿ.ಟಿ ಜಂಕ್ಷನ್ ಬಳಿಯಿರುವ ನಂತೂರು ಜಂಕ್ಷನ್ ವರೆಗೆ ಇರುವ ರಾಷ್ಟ್ರೀಯ ಹೆದ್ದಾರಿಯನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಕ್ರಮವಹಿಸುವುದು. |
| ಈ) | ಹಾಗಿದ್ದಲ್ಲಿ, ಸರಿಯಾದ ಪಾದಾಚಾರಿ ಮಾರ್ಗಗಳು ಅನಧಿಕೃತವಾಗಿ ಪಾದಚಾರಿ ಮಾರ್ಗವನ್ನು ಆಕ್ರಮಿಸಿರುವುದನ್ನು ತೆರವುಗೊಳಿಸುವುದು | |

| | | |
|---|---|---|
| | ಹೊರರಾಜ್ಯ ವಾಹನಗಳ ಸುಗಮ ಸಂಚಾರಕ್ಕೆ ಬೈಪಾಸ್ ಮೇಲ್ಸೇತುವೆಗಳನ್ನು ನಿರ್ಮಿಸುವುದಕ್ಕೆ ಸರ್ಕಾರ ಮುಂದಾಗುವುದೇ: | |
| ಊ) | ಬಹಳ ಸಮಯದಿಂದ ನೆನೆಗುದಿಗೆ ಬಿದ್ದಿರುವ "ಮಂಗಳ ಕಾರ್ನಿಷ್ ರೋಡ್"ಅನ್ನು ಅನುಷ್ಠಾನಗೊಳಿಸಲಾಗಿವುದೇ ಮಂಗಳೂರು ನಗರವನ್ನು ನಿಜವಾದ "ಸ್ಮಾರ್ಟ್ ಸಿಟಿ" ಆಗಿ ಕಾರ್ಯಗತಗೊಳಿಸಲು ಸರ್ಕಾರ ಯೋಜನೆಗಳನ್ನು ತ್ವರಿತವಾಗಿ ಹಮ್ಮಿಕೊಳ್ಳುವುದೇ? (ಅಂಕಿ, ಅಂಶ ವಿವರ ನೀಡುವುದು) | ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಮಂಗಳ ಕಾರ್ನಿಷ್ ರಸ್ತೆ ಕಾಮಗಾರಿಯನ್ನು ಅನುಷ್ಠಾನಗೊಳಿಸಲಾಗುತ್ತಿಲ್ಲ. |

ಸಂಖ್ಯೆ:ನಅಇ 160 ಸಿಎಸ್ಎಸ್ 2023

4/12/2023

**(ಬಿ.ಎಸ್.ಸುರೇಶ)**

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು